ಭಾರತೀಯ ಜನತಾ ಪಾರ್ಟಿ–ಕರ್ನಾಟಕ
Bharatiya Janatha Party-Karnataka
# 48, "ಜಗನ್ನಾಥ ಭವನ", ದೇವಸ್ಥಾನದ ಬೀದಿ, 11ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು–560003.
ದೂ.: 080–22041976, 23569999, ಫ್ಯಾಕ್ಸ್: 080–23460398

3–4–2025

ಗೆ,

ಸಂಪಾದಕರು / ವರದಿಗಾರರು.

ಪ್ರಕಟಣೆಯ ಕೃಪೆಗಾಗಿ

# ಏರಿಸಿದ ಬೆಲೆ ಇಳಿಸಿ; ಇಲ್ಲವೇ ತೀವ್ರ ಹೋರಾಟ ಅನಿವಾರ್ಯ– ಸುಧಾಕರ ರೆಡ್ಡಿ ಎಚ್ಚರಿಕೆ

ಬೆಂಗಳೂರು: ಕಾಂಗ್ರೆಸ್ ಸರಕಾರವು ಏರಿಸಿದ ಡೀಸೆಲ್ ದರ, ವಿದ್ಯುತ್ ದರ, ನೀರಿನ ದರ, ಹಾಲಿನ ದರ ಸೇರಿ ವಿವಿಧ ಬೆಲೆಯನ್ನು ಕೂಡಲೇ ಕಡಿಮೆ ಮಾಡಬೇಕು. ಇಲ್ಲವಾದರೆ ಬಿಜೆಪಿಯು ಜನರ ಸಹಕಾರದೊಂದಿಗೆ ಜನಾಕ್ರೋಶ ಯಾತ್ರೆ ಸೇರಿದಂತೆ ವಿವಿಧ ಹಂತದ ಹೋರಾಟವನ್ನು ತೀವ್ರಗೊಳಿಸಲಿದೆ ಎಂದು ರಾಜ್ಯ ಸಹ ಉಸ್ತುವಾರಿ ಸುಧಾಕರ ರೆಡ್ಡಿ ಅವರು ಎಚ್ಚರಿಸಿದ್ದಾರೆ.

ಬಿಜೆಪಿ ಈಗಾಗಲೇ ಅಹೋರಾತ್ರಿ ಧರಣಿ ನಡೆಸಿದೆ. ಮುಖ್ಯಮಂತ್ರಿಗಳನ್ನು ಎಚ್ಚರಿಸುವ ಉದ್ದೇಶದಿಂದ ಸಿಎಂ ಮನೆಗೆ ಮುತ್ತಿಗೆ ಹಾಕಲು ಮುಂದಾಗಿತ್ತು. ಈ ಸಂದರ್ಭದಲ್ಲಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿ ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ, ವಿಪಕ್ಷ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಬೈರತಿ ಬಸವರಾಜ್, ಪ್ರಮುಖರಾದ ಸಿ.ಟಿ.ರವಿ,

ಎಸ್.ಆರ್.ವಿಶ್ವನಾಥ್ ಮೊದಲಾದವರಲ್ಲದೆ, ನೂರಾರು ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಸರಕಾರದ ಈ ನಡೆ ಖಂಡನಾರ್ಹ ಎಂದು ಅವರು ತಿಳಿಸಿದ್ದಾರೆ.

ರಾಜ್ಯದಲ್ಲಿ ಬೆಲೆ ಏರಿಕೆ ತೀವ್ರಗೊಂಡಿದೆ. ಇದರಿಂದ ಜನಸಾಮಾನ್ಯರು ಮತ್ತು ಮಧ್ಯಮ ವರ್ಗದ ಜನತೆ ಸಂಕಷ್ಟಕ್ಕೆ ಈಡಾಗಿದ್ದಾರೆ. ರೈತರ ಕಡೆಗೂ ಸರಕಾರ ಗಮನ ಕೊಡುತ್ತಿಲ್ಲ. ಅಭಿವೃದ್ಧಿ ಎಂಬುದು ಕೇವಲ ಮರೀಚಿಕೆಯಾಗಿದೆ. ಪರಿಶಿಷ್ಟ ಜಾತಿ, ಜನಾಂಗದ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸಿರುವ ದಲಿತವಿರೋಧಿ, ಜನ ವಿರೋಧಿ, ರೈತ ವಿರೋಧಿ ಸರಕಾರ ಇಲ್ಲಿದೆ. ಈ ಸರಕಾರಕ್ಕೆ ಮುಂದಿನ ದಿನಗಳಲ್ಲಿ ಜನತೆ ಪಾಠ ಕಲಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಕಾನೂನು- ಸುವ್ಯವಸ್ಥೆ ಕುಸಿದು ಬಿದ್ದಿದೆ. ಆದರೆ, ಸರಕಾರವು ಅದರ ಕಡೆಗೆ ಗಮನ ಕೊಡುತ್ತಿಲ್ಲ. ಸಿಎಂ ಕುರ್ಚಿ ಕಚ್ಚಾಟದಲ್ಲೇ ಕಾಂಗ್ರೆಸ್ ನಾಯಕರು ದಿನಕಳೆಯುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸರಕಾರವು ಅಲ್ಪಸಂಖ್ಯಾತರ ತುಷ್ಟೀಕರಣ ನೀತಿಯ ಸಲುವಾಗಿ ಮುಸ್ಲಿಮರಿಗೆ ಸರಕಾರಿ ಕಾಮಗಾರಿಗಳಲ್ಲಿ ಶೇ 4 ಮೀಸಲಾತಿ ನೀಡಲು ಮುಂದಾಗಿದೆ. ಇದು ಸಂವಿಧಾನ ಬಾಹಿರ ಕ್ರಮ. ಇದೆಲ್ಲದರ ಕುರಿತು ಜನಾಕ್ರೋಶ ಯಾತ್ರೆ ವೇಳೆ ಜನಜಾಗೃತಿ ಮೂಡಿಸಲಿದ್ದೇವೆ ಎಂದು ಅವರು ತಿಳಿಸಿದ್ದಾರೆ.

(ಕರುಣಾಕರ ಖಾಸಲೆ)
ಮಾಧ್ಯಮ ಸಂಚಾಲಕರು
ಬಿಜೆಪಿ ಕರ್ನಾಟಕ